**ಹಿರಿಯ ಶ್ರೇಣಿ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ದೇವದುರ್ಗ.**

**CC No.1910/2021**

**PW-1 CW-2**

| | | |
|---|---|---|
| ಸಾಕ್ಷಿದಾರನ ಹೆಸರು | ಃ | ಕೆಂಚಪ್ಪ ತಂದೆ ದೊಡ್ಡಪ್ಪ |
| ವಯಸ್ಸು | ಃ | 42 ವರ್ಷ |
| ಉದ್ಯೋಗ | ಃ | ಚಾಲಕ |
| ವಾಸಸ್ಥಳ | ಃ | ಜಾಲಹಳ್ಳಿ |
| ಪ್ರಮಾಣಿಕರಿಸಿದ ದಿನಾಂಕ | ಃ | 18-04-2024 |

---

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ.**

ಸಾಕ್ಷಿಗೆ ಈಗ ಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಪಂಚನಾಮೆಯನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಜಪ್ತಿಪಡಿಸಿಕೊಂಡಿಲ್ಲ. ನಿಪಿ-1 ರಲ್ಲಿ ಬರೆದ ವಿಷಯ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಸಸಅ ರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಸ ಸ ಅ ರವರಿಂದ.**

ದಿನಾಂಕ 26-10-2020 ರಂದು ಜಾಲಹಳ್ಳಿ ಪೊಲೀಸರು ಬೆಳಿಗ್ಗೆ 11-15 ರಿಂದ 12-15 ಗಂಟೆಯವರೆಗೆ ಕೃತ್ಯ ನಡೆದ ಸ್ಥಳದಲ್ಲಿ ಪಂಚನಾಮೆಯನ್ನು ಮಾಡಿ ಅಲ್ಲಿ ಮುದ್ದೆಮಾಲುಗಳನ್ನು ಜಪ್ತಿಪಡಿಸಿಕೊಂಡು ನಿಪಿ-1 ರಂತೆ ಪಂಚನಾಮೆಯನ್ನು ಬರೆದು ನನ್ನ ಸಹಿ ಪಡೆದರು ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಇಲ್ಲ ಎಂದು ಹೇಳುತ್ತಾರೆ.**

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೇ.ಸರಿ.ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,
ದೇವದುರ್ಗ.